**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**
**ಸಿ.ಸಿ.ನಂ. 984/2022**

ದಿನಾಂಕಃ 28-08-2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಿ.ಡಬ್ಲ್ಯೂಃ1 ಸಿ.ಡಬ್ಲ್ಯೂಃ **3**

ಸಾಕ್ಷಿಯ ಹೆಸರು ಃ ಸಂಜಯ್ ಪಿ ಜಿ
ಗಂಡನ ಹೆಸರು ಃ ಗಂಗಾಧರ್
ವಯಸ್ಸು ಃ 23 ವರ್ಷ
ಉದ್ಯೋಗ ಃ ಕೂಲಿ
ವಾಸ ಃ ಎಸ್ ಬಿದರೆ

**ಮುಖ್ಯ ವಿಚಾರಣೆಃ ಮಾನ್ಯ ಸಸಅ ಅವರಿಂದಃ-**

ನನ್ನ ಮುಂದೆ ಯಾವುದೇ ಮಹಜರ್ ಮಾಡಿರುವುದಿಲ್ಲ ಮತ್ತು ಯಾವುದೆ ವಾಹವನ್ನು ವಶಪಡಿಸಿಕೊಂಡಿರುವುದಿಲ್ಲ. ಠಾಣೆಗೆ ಹೋದಾಗ ಪೊಲೀಸರು ನನ್ನ ಸಹಿ ಪಡೆದಿರುತ್ತಾರೆ. ಸಾಕ್ಷಿಯು ಸಹಿ ನೋಡಿ ಗುರುತಿಸಿದ್ದು ಮಹಜರ್ ಅನ್ನು ನಿಪಿ-1, ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಛಾಯಾಚಿತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು, ಅಮಾನತು ಮಹಜರ್ ಅನ್ನು ನಿಪಿ-3, ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀಸವಾಲುಃ_ಮಾನ್ಯ_ಸಸಅ._ರವರಿಂದ_ಃ**

ದಿಃ 14-08-2021 ರಂದು ಪೊಲೀಸರು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಚಾಸಾ-8 ರವರು ತೋರಿಸಿದ ಸ್ಥಳದಲ್ಲಿ ಮಹಜರ್ ಅನ್ನು ಬೆಳಿಗ್ಗ 11-00 ರಿಂದ 12-00 ರ ವರೆಗೆ ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಸಂಜೆ 6-00 ಕ್ಕೆ ಅಪಘಾತಕೊಳ್ಳಪಟ್ಟ ವಾಹನಗಳಾದ ಟ್ಯಾಕ್ಟರ್ ಇಂಜಿನ್ ಕೆಎ-46-ಟಿ-5878 ಮತ್ತು ಟ್ರೈಲರ್ ಕೆಎ-46-5879 ಅನ್ನು ನಮ್ಮ ಮುಂದೆ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಃ ಇಲ್ಲ**

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ

2 ನೇ ಹೇಃಪ್ರಃಪ್ರಃದಃನ್ಯಾಃದಂ.,ರವರು,
ಕಡೂರು.